# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 421 (595)) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್ ಗೋಪಿನಾಥ್ |
| ಉತ್ತರಿಸುವ ದಿನಾಂಕ | : | 08-12-2023 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಎರಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆ ಯಿಂದ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯಿಂದ ವಿಶೇಷವಾಗಿ ಬೆಂಗಳೂರು ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೇಡಿಕೆ ಇರುವ ವಿದ್ಯಾರ್ಥಿಗಳ ವೇತನ ಎಷ್ಟು?</td><td>

ಸಮಾಜ ಕಲ್ಯಾಣ ಇಲಾಖೆ:

ಕಳೆದ ಎರಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆ ಯಿಂದ ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಪಟ್ಟಂತೆ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಇರುವ ಬೇಡಿಕೆ ಈ ಕೆಳಕಂಡಂತಿದೆ

<table>
<tr><td>ಜಿಲ್ಲೆ</td><td colspan="2">ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ</td><td colspan="2">ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ</td><td>ಒಟ್ಟು</td></tr>
<tr><td></td><td>2021-22</td><td>2022-23</td><td>2021-22</td><td>2022-23</td><td></td></tr>
<tr><td>ಬೆಂಗಳೂರು ನಗರ</td><td>67606</td><td>54007</td><td>40776</td><td>40430</td><td>202819</td></tr>
<tr><td>ಬೆಂಗಳೂರು ಗ್ರಾಮಾಂತರ</td><td>21870</td><td>18848</td><td>5898</td><td>5060</td><td>51676</td></tr>
</table>

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:

ಕಳೆದ ಎರಡು ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯಿಂದ ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಪಟ್ಟಂತೆ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಇರುವ ಬೇಡಿಕೆ ಈ ಕೆಳಕಂಡಂತಿದೆ.

<table>
<tr><td rowspan="2">ಜಿಲ್ಲೆ</td><td colspan="2">ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ</td></tr>
<tr><td>2021-22</td><td>2022-23</td></tr>
<tr><td>ಬೆಂಗಳೂರು ನಗರ</td><td>78216</td><td>9239</td></tr>
<tr><td>ಬೆಂಗಳೂರು ಗ್ರಾಮಾಂತರ</td><td>29858</td><td>5665</td></tr>
</table>
</td></tr>
</table>

<table>
<tr>
<td>ಆ)</td>
<td>ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗಿದೆ;</td>
<td>
ಸಮಾಜ ಕಲ್ಯಾಣ ಇಲಾಖೆ:<br>
ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಸಂಬಂಧಿಸಿದಂತೆ 2021-22 ಮತ್ತು 2022-23ನೇ ಸಾಲುಗಳಲ್ಲಿ ಈ ಕೆಳಕಂಡಂತೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿರುತ್ತದೆ.
<table>
<tr><th rowspan="2">ಜಿಲ್ಲೆ</th><th colspan="2">ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ</th><th colspan="2">ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ</th><th rowspan="2">ಒಟ್ಟು</th></tr>
<tr><th>2021-22</th><th>2022-23</th><th>2021-22</th><th>2022-23</th></tr>
<tr><td>ಬೆಂಗಳೂರು ನಗರ</td><td>61483</td><td>52906</td><td>38590</td><td>35714</td><td>188693</td></tr>
<tr><td>ಬೆಂಗಳೂರು ಗ್ರಾಮಾಂತರ</td><td>20192</td><td>17681</td><td>5716</td><td>4741</td><td>48330</td></tr>
<tr><td>ಒಟ್ಟು</td><td>81675</td><td>70587</td><td>44306</td><td>40455</td><td>237023</td></tr>
</table>
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:<br>
ಕಳೆದ ಎರಡು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಬೆಂಗಳೂರು ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವಿದ್ಯಾರ್ಥಿವೇತನ ಪಾವತಿ ಮಾಡಿರುವ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ
<table>
<tr><th>ಆರ್ಥಿಕ ವರ್ಷ</th><th>ಜಿಲ್ಲೆ</th><th>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಪಾವತಿ ಮಾಡಿರುವ ವಿದ್ಯಾರ್ಥಿಗಳ ಸಂಖ್ಯೆ</th><th>ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಾವತಿ ಮಾಡಿರುವ ವಿದ್ಯಾರ್ಥಿಗಳ ಸಂಖ್ಯೆ</th></tr>
<tr><td rowspan="2">2021-22</td><td>ಬೆಂಗಳೂರು ನಗರ</td><td>16688</td><td>0</td></tr>
<tr><td>ಬೆಂಗಳೂರು ಗ್ರಾಮಾಂತರ</td><td>11718</td><td>0</td></tr>
<tr><td rowspan="2">2022-23</td><td>ಬೆಂಗಳೂರು ನಗರ</td><td>1812</td><td>55886</td></tr>
<tr><td>ಬೆಂಗಳೂರು ಗ್ರಾಮಾಂತರ</td><td>1601</td><td>3699</td></tr>
</table>
</td>
</tr>
<tr>
<td>ಇ)</td>
<td>ಕಳೆದ ಎರಡು ವರ್ಷಗಳಿಂದ ವಿದ್ಯಾರ್ಥಿ ವೇತನ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ಹೌದು.<br>
ಲಭ್ಯವಿದ್ದ ಅನುದಾನದಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಪಾವತಿಸಲು ಕ್ರಮವಹಿಸಲಾಗಿದೆ.</td>
</tr>
<tr>
<td>ಈ)</td>
<td>ಬಂದಿದ್ದಲ್ಲಿ ಶೀಘ್ರವಾಗಿ ವಿದ್ಯಾರ್ಥಿ ವೇತನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)</td>
<td>ಸಮಾಜ ಕಲ್ಯಾಣ ಇಲಾಖೆ:<br>
ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇ-ಆಡಳಿತ ಇಲಾಖೆಯಿಂದ ಅಭಿವೃದ್ಧಿಪಡಿಸಿ ನಿರ್ವಹಣೆ</td>
</tr>
</table>

| | | |
|---|---|---|
| | | ಮಾಡಲಾಗುತ್ತಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (SSP) ಮೂಲಕ ಅನುಷ್ಠಾನ ಮಾಡಲಾಗುತ್ತಿದ್ದು, ಮಂಜೂರಾದ ವಿದ್ಯಾರ್ಥಿವೇತನ ಮೊತ್ತವನ್ನು ವಿದ್ಯಾರ್ಥಿಯ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. ಸದರಿ ಪ್ರಕ್ರಿಯೆಗೆ ವಿದ್ಯಾರ್ಥಿಯ ಬ್ಯಾಂಕ್ ಖಾತೆ ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಕಡ್ಡಾಯವಾಗಿರುತ್ತದೆ. ಮುಂದುವರೆದು, ಇಲಾಖೆಯ ವತಿಯಿಂದ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br><br>1. ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಯನ್ನು ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಮಾಡಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವ್ಯಾಪಕ ಪ್ರಚಾರ ಮತ್ತು ತಾಲ್ಲೂಕು ಮಟ್ಟದಲ್ಲಿ ಆಧಾರ್ ಜೋಡಣೆಗೆ ಸಂಬಂಧಿಸಿದಂತೆ ಅಂಚೆ ಇಲಾಖೆಯ ಸಹಯೋಗದೊಂದಿಗೆ Camp ಗಳನ್ನು ಹಮ್ಮಿಕೊಳ್ಳಲಾಗಿದೆ.<br>2. ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ವಿದ್ಯಾರ್ಥಿವೇತನ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ತ್ವರಿತವಾಗಿ ವಿದ್ಯಾರ್ಥಿವೇತನ ಮಂಜೂರಾತಿ ಹಾಗೂ ಪಾವತಿಗಾಗಿ ಕ್ರಮವಹಿಸಲಾಗಿರುತ್ತದೆ.<br>3. ಕಾಲಕಾಲಕ್ಕೆ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ನಲ್ಲಿ ಕಂಡುಬರುತ್ತಿರುವ ಸಮಸ್ಯೆಗಳನ್ನು ಯೋಜನಾ ನಿರ್ದೇಶಕರು, ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್, ಇ-ಆಡಳಿತ ಇಲಾಖೆ ರವರ ಗಮನಕ್ಕೆ ತಂದು ಸಮಸ್ಯೆಗಳನ್ನು ಬಗೆಹರಿಸಲಾಗಿರುತ್ತದೆ.<br><br>**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:**<br><br>ಪ್ರಸಕ್ತ ಸಾಲಿಗೆ ಅರ್ಜಿ ಆಹ್ವಾನಿಸಲಾಗಿರುತ್ತದೆ. ಅದರಂತೆ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆಯನುಸಾರ ವಿದ್ಯಾರ್ಥಿ ವೇತನವನ್ನು ಪಾವತಿ ಮಾಡಲು ಕ್ರಮ ವಹಿಸಲಾಗುವುದು. |

**ಸಕಇ 233 ಪಕವಿ 2023**

**(ಡಾ ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು